# ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)

ಸಂಖ್ಯೆ: ಚುನಾವಣೆ/ವಿವ/42/2015-16

ಪ್ರಾದೇಶಿಕ ಆಯುಕ್ತರ ಕಛೇರಿ,
2ನೇ ಮಹಡಿ , ಬಿ.ಎಂ.ಟಿ.ಸಿ ಕಟ್ಟಡ,
ಕೆ.ಹೆಚ್.ರಸ್ತೆ , ಶಾಂತಿನಗರ,
ಬೆಂಗಳೂರು, ದಿನಾಂಕ: 07-10-2016.

## ಅಧಿಕೃತ ಜ್ಞಾಪನ

**ವಿಷಯ:** 2016ನೇ ಸಾಲಿನಲ್ಲಿ ಪದಾವಧಿ ಮುಗಿಯಲಿರುವ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇದರ ಆಡಳಿತ ಮಂಡಳಿ ಮತ್ತು ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ಕರಡು ಮತದಾರರ ಪಟ್ಟಿ ಪ್ರಕಟಿಸುವ ಕುರಿತು.

**ಉಲ್ಲೇಖ:**
1. ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ರವರ ಆದೇಶ ಸಂಖ್ಯೆ: ಸಚುಪ್ರಾ/ ಚುಅನೇ/ಅಪೆಕ್ಸ್/06/2016 ದಿನಾಂಕ: 16-1-2016.
2. ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ರವರ ಅಧಿಸೂಚನೆ ಸಂಖ್ಯೆ:ಸಚುಪ್ರಾ/ಆಡಳಿತ/ಚುನಾವಣೆ/07/2016 ದಿನಾಂಕ: 16-1-2016.
3. ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ: ಸಚುಪ್ರಾ/ಬೆಂ.ವಿ./ ಆಮಂಚು/ ಚುನಾವಣೆ/ 1426/2015/391 ದಿ: 18-2-2016.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆಡಳಿತ/ಚುನಾವಣೆ/1/2016-17/289 ದಿನಾಂಕ: 13-05-2016. (ಸ್ವೀಕೃತಿ ದಿನಾಂಕ: 18-5-2016)
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆಡಳಿತ/ಚುನಾವಣೆ/6/2016-17/337 ದಿನಾಂಕ: 19-05-2016.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆಡಳಿತ/ಚುನಾವಣೆ/7/2016-17 ದಿನಾಂಕ: 30-05-2016.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆಡಳಿತ/ಚುನಾವಣೆ/8/2016-17/479 ದಿನಾಂಕ: 3-6-2016.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆಡಳಿತ/ಚುನಾವಣೆ/9/2016-17/579 ದಿನಾಂಕ: 18-06-2016.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ ಆಡಳಿತ/ಚುನಾವಣೆ/16/2016-17 ದಿನಾಂಕ: 16-08-2016.

10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ಆಡಳಿತ/ಚುನಾವಣೆ/17/2016-17/1189 ದಿನಾಂಕ: 1-9-2016.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ಆಡಳಿತ/ಚುನಾವಣೆ/16/2016-17/1252 ದಿನಾಂಕ:15-09-2016.
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ಆಡಳಿತ/ಚುನಾವಣೆ/19/2016-17/1372 ದಿನಾಂಕ: 3-10-2016.
13. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರ ಪತ್ರ ಸಂಖ್ಯೆ: ಸಂಸ/ಆಡಳಿತ/ಚುನಾವಣೆ/20/2016-17 ದಿನಾಂಕ: 7-10-2016.
14. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರು ದಿ:7-10-2016 ರಂದು ಸಲ್ಲಿಸಿರುವ ಅಂತಿಮ ಮತದಾರರ ಪಟ್ಟಿ ಪ್ರಕಟಿಸುವ ದಿನಾಂಕಕ್ಕೆ ಸದಸ್ಯ ಸೌಹಾರ್ದ ಸಹಕಾರಿಗಳು ಸುಸ್ತಿದಾರರಾಗುವ ಬಗ್ಗೆ ಮಾಹಿತಿ.

********

ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರರವರ ಉಲ್ಲೇಖ(1)ರ ಆದೇಶದಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರುರವರನ್ನು ಅವರ ಕಾರ್ಯವ್ಯಾಪ್ತಿಯಲ್ಲಿ ಒಳಪಡುವ ಅಪೆಕ್ಸ್ ಸಹಕಾರ ಸಂಘಗಳ ಆಡಳಿತ ಮಂಡಳಿ ಹಾಗೂ ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆ ನಡೆಸುವ ಸಂಬಂಧ ಜಿಲ್ಲಾ ಚುನಾವಣಾಧಿಕಾರಿಯನ್ನಾಗಿ ನೇಮಕ ಮಾಡಲಾಗಿರುತ್ತದೆ. ಹಾಗೂ ಉಲ್ಲೇಖ(2)ರ ಅಧಿಸೂಚನೆಯಲ್ಲಿ ಅಪೆಕ್ಸ್ ಸಹಕಾರ ಸಂಘಗಳ ಚುನಾವಣೆ ನಡೆಸುವ ಬಗ್ಗೆ ಕಾಲಾಕಾಲಕ್ಕೆ ಕೈಗೊಳ್ಳಬೇಕಾದ ಕ್ರಮಗಳ ವಿವರಿಸಲಾಗಿರುತ್ತದೆ ಹಾಗೂ ಚುನಾವಣೆಗೆ ದಿನಾಂಕಗಳನ್ನು ನಿಗದಿಪಡಿಸಲಾಗಿರುತ್ತದೆ. ಅದರಂತೆ ಅಪೆಕ್ಸ್ ಸಹಕಾರ ಸಂಘಗಳಿಗೆ ದಿನಾಂಕ: 28-9-2016 ಮತ್ತು 29-9-2016 ಈ ಎರಡು ದಿನಾಂಕಗಳಲ್ಲಿ ಸೂಕ್ತವೆನಿಸುವ ಯಾವುದೇ ದಿನಾಂಕದಲ್ಲಿ ಚುನಾವಣೆಯನ್ನು ನಿಗದಿಪಡಿಸತಕ್ಕದ್ದೆಂದು ತಿಳಿಸಲಾಗಿದೆ.

ಉಲ್ಲೇಖ(3)ರ ಪತ್ರದಲ್ಲಿ "ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕರಿಯು ರಾಜ್ಯ ಮಟ್ಟದ ಅಪೆಕ್ಸ್/ಫೆಡರಲ್ ಸಂಸ್ಥೆಯಾಗಿರುತ್ತದೆ. ಸಂಯುಕ್ತ ಸಹಕಾರಿಯ ಚುನಾವಣೆಯನ್ನು ಪ್ರಾಥಮಿಕ/ಮಾಧ್ಯಮಿಕ/ಒಕ್ಕೂಟ ಸಹಕಾರಿಗಳ ಪ್ರತಿನಿಧಿಗಳ ಮುಖಾಂತರ ನಡೆಸಬೇಕಾಗಿರುವುದರಿಂದ, ಮಾಧ್ಯಮಿಕ ಸಹಕಾರ ಸಂಘಗಳಿಗೆ/ ಸಹಕಾರಿಗಳಿಗೆ ಗೊತ್ತುಪಡಿಸಲಾದ ಚುನಾವಣಾ ದಿನಾಂಕಗಳಲ್ಲಿಯೇ ಫೆಡರಲ್ ಸಹಕಾರ ಸಂಘಗಳಿಗೆ/ ಒಕ್ಕೂಟ ಸಹಕಾರಿಗಳಿಗೆ ಚುನಾವಣೆಯನ್ನು ನಡೆಸಬಹುದಾಗಿರುತ್ತದೆ. ಅದೇ ರೀತಿಯಲ್ಲಿ ಫೆಡರಲ್ ಸಹಕಾರ ಸಂಘಗಳಿಗೆ/ ಸಹಕಾರಿಗಳಿಗೆ ಗೊತ್ತುಪಡಿಸಿರುವ ದಿನಾಂಕಗಳಲ್ಲಿ ಸೌಹಾರ್ದ ಸಂಯುಕ್ತ ಸಹಕಾರಿಯ ಚುನಾವಣೆಯನ್ನು ನಡೆಸುವುದು ಸೂಕ್ತವೆಂದು ಅಭಿಪ್ರಾಯಪಟ್ಟು, ಫೆಡರಲ್ ಸಹಕಾರ ಸಂಘಗಳು/ ಒಕ್ಕೂಟ ಸಹಕಾರಿಗಳಿಗೆ ಗೊತ್ತುಪಡಿಸಲಾಗಿರುವ ಚುನಾವಣಾ ದಿನಾಂಕಗಳಲ್ಲಿ ಸಂಯುಕ್ತ ಸಹಕಾರಿಯ ಚುನಾವಣೆಯನ್ನು ನಡೆಸಲು ಅಗತ್ಯ ಕ್ರಮ ಕೈಗೊಳ್ಳಲು ಚುನಾವಣಾಧಿಕಾರಿಗಳಿಗೆ ಈ ಮೂಲಕ

ಅನುಮತಿ ನೀಡಲಾಗಿದೆ." ಎಂದು ತಿಳಿಸಲಾಗಿರುತ್ತದೆ. ಅದರಂತೆ ಪರಿಶೀಲಿಸಲಾಗಿ, ಫೆಡರಲ್ ಸಹಕಾರ ಸಂಘಗಳಿಗೆ ದಿನಾಂಕ: 30-7-2016 ಮತ್ತು 31-7-2016 ಈ ಎರಡು ದಿನಾಂಕಗಳಲ್ಲಿ ಸೂಕ್ತವೆನಿಸುವ ಯಾವುದೇ ದಿನಾಂಕದಲ್ಲಿ ಚುನಾವಣೆಯನ್ನು ನಿಗದಿಪಡಿಸತಕ್ಕದ್ದೆಂದು ತಿಳಿಸಲಾಗಿದೆ.

ಅದರಂತೆ ಜಿಲ್ಲಾ ಚುನಾವಣಾಧಿಕಾರಿಗಳು ಚುನಾವಣಾ ದಿನಾಂಕಕ್ಕೆ ಕನಿಷ್ಠ 45 ದಿನಗಳ ಪೂರ್ವದಲ್ಲಿ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇವರು ಉಲ್ಲೇಖ(4)ರನ್ವಯ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ, ಸುಸ್ತಿದಾರರ ಕರಡು ಪಟ್ಟಿ ಮತ್ತು ಮತದಾನದ ಹಕ್ಕನ್ನು ಹೊಂದಿರದ ಅನರ್ಹ ಸದಸ್ಯರ ಕರಡು ಪಟ್ಟಿ ಮತ್ತು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸುವ ದಿನಾಂಕಕ್ಕೆ ಸುಸ್ತಿಯಾಗುವಂತಹ ಮತದಾರರ ಕರಡು ಪಟ್ಟಿಗಳನ್ನು ಮತ್ತು ಅನುಮೋದಿತ ಬೈಲಾ ಪ್ರತಿಯೊಂದಿಗೆ ಸಲ್ಲಿಸಿರುತ್ತಾರೆ. ಮುಂದುವರೆದು ಉಲ್ಲೇಖ(5)ರಿಂದ (14)ರವರೆಗೆ ವಿವಿಧ ದಿನಾಂಕಗಳಲ್ಲಿ ಸದಸ್ಯ ಸಂಘಗಳಿಗೆ ಸಂಬಂಧಿಸಿದ ಪೂರಕ ಮಾಹಿತಿ/ ದಾಖಲೆಗಳನ್ನು ಪರಿಶೀಲನೆಗೆ ಸಲ್ಲಿಸಿರುತ್ತಾರೆ.

ಸದರಿಯವರಿಂದ ಎಲ್ಲಾ ಅಗತ್ಯ ದಾಖಲೆಗಳನ್ನು ಪಡೆದು ಪರಿಶೀಲಿಸುವಲ್ಲಿ ಉಲ್ಲೇಖ(1)ರಿಂದ (3)ರವರೆಗಿನ ಆದೇಶ ಮತ್ತು ಪತ್ರಗಳಲ್ಲಿ ನಿಗದಿಪಡಿಸಿದ ದಿನಾಂಕಗಳು ಮುಕ್ತಾಯಗೊಂಡಿರುತ್ತವೆ. ಆದ್ದರಿಂದ ಚುನಾವಣೆ ನಡೆಸಲು ನಿಯಮಾನುಸಾರ ಅಗತ್ಯವಿರುವ ಕಾಲಾವಕಾಶವನ್ನು ಗಮನದಲ್ಲಿಟ್ಟು ಕೊಂಡು ದಿನಾಂಕ: 27-11-2016ರಂದು ಚುನಾವಣಾ ದಿನಾಂಕವನ್ನು ನಿಗದಿಪಡಿಸಿದೆ.

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇದರ ಚುನಾವಣೆ ನಡೆಸುವ ಬಗ್ಗೆ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ, ಸುಸ್ತಿದಾರರ ಕರಡು ಪಟ್ಟಿ, ಅನರ್ಹ ಸದಸ್ಯ ಸಂಘಗಳ ಕರಡು ಪಟ್ಟಿ ಮತ್ತು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸುವ ದಿನಾಂಕಕ್ಕೆ ಸುಸ್ತಿಯಾಗುವಂತಹ ಮತದಾರರ ಕರಡು ಪಟ್ಟಿಯನ್ನು ಈ ಮೂಲಕ ಸಂಬಂಧಪಟ್ಟವರ ಗಮನಕ್ಕೆ ಪ್ರಕಟಿಸಲಾಗಿದೆ. ಈ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಈ ದಿನಾಂಕದಿಂದ ಮೂವತ್ತು ದಿನಗಳ ಒಳಗಾಗಿ ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲಾವಕಾಶ ನೀಡಿದೆ. ಆಕ್ಷೇಪಣೆ ಸಲ್ಲಿಸಬಯಸುವ ಸದಸ್ಯರು/ ಸದಸ್ಯ ಸಂಘಗಳು ಜಿಲ್ಲಾ ಚುನಾವಣಾಧಿಕಾರಿಗಳಿಗೆ/ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಇದರ ವ್ಯವಸ್ಥಾಪಕ ನಿರ್ದೇಶಕರಿಗೆ ನಿಗದಿತ ಕಾಲಾವಧಿಯಲ್ಲಿ ನೇರವಾಗಿ ತಮ್ಮ ನಿರ್ದಿಷ್ಟ ಆಕ್ಷೇಪಣೆಗಳನ್ನು ಅಗತ್ಯ ಪೂರಕ ದಾಖಲೆಗಳೊಂದಿಗೆ ಸಲ್ಲಿಸುವುದು.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರು ಸುಸ್ತಿದಾರರಿಗೆ ಅವರ ಸುಸ್ತಿ ಬಾಕಿಯನ್ನು 30 ದಿನಗಳ ಒಳಗಾಗಿ ಪಾವತಿಸಲು ಕಾಲಾವಕಾಶ ನೀಡಿ ನೋಟೀಸ್ ನೀಡುವ ಬಗ್ಗೆ ಮತ್ತು ಆಕ್ಷೇಪಣೆಗಳ ಬಗ್ಗೆ ನಿಯಮಾನುಸಾರ ಮುಂದಿನ ಅಗತ್ಯ ಕ್ರಮ ವಹಿಸಲು ಸೂಚಿಸಿದೆ.

M/

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರುರವರು ಇದರೊಂದಿಗೆ ಲಗತ್ತಿಸಲಾಗಿರುವ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ, ಸುಸ್ತಿದಾರರ ಕರಡು ಪಟ್ಟಿ, ಅನರ್ಹ ಸದಸ್ಯರ ಕರಡು ಪಟ್ಟಿ ಮತ್ತು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸುವ ದಿನಾಂಕಕ್ಕೆ ಸುಸ್ತಿಯಾಗುವಂತಹ ಮತದಾರರ ಕರಡು ಪಟ್ಟಿಗಳನ್ನು ಮಹಾಮಂಡಳದ ಸೂಚನಾ ಫಲಕದಲ್ಲಿ, ಸದಸ್ಯ ಸಂಘಗಳ ಕಛೇರಿಗಳಲ್ಲಿ ಹಾಗೂ ನಿಯಮಾನುಸಾರ ಅನ್ವಯಿಸುವ ಇತರೆ ಶಾಖಾ ಕಛೇರಿಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಂಡು, ಪ್ರಕಟಿಸಿದ ಬಗ್ಗೆ ಈ ಕಛೇರಿಗೆ ವರದಿ ಸಲ್ಲಿಸಲು ಸೂಚಿಸಿದೆ.

Jayanthi

**ಪ್ರಾದೇಶಿಕ ಆಯುಕ್ತರು ಹಾಗೂ**
**ಜಿಲ್ಲಾ ಚುನಾವಣಾಧಿಕಾರಿಗಳು,**
**ಬೆಂಗಳೂರು ವಿಭಾಗ, ಬೆಂಗಳೂರು.**

**<u>ಪ್ರತಿಯನ್ನು:-</u>**

(1) ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ರವರಿಗೆ ಕರಡು ಮತದಾರರ ಪಟ್ಟಿಯನ್ನು ಲಗತ್ತಿಸಿ ಮಾಹಿತಿಗಾಗಿ ಕಳುಹಿಸಿದೆ.

(2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ನಿರ್ಮಾಣ ಭವನ, ಡಾ: ರಾಜ್‌ಕುಮಾರ್ ರಸ್ತೆ, 1ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-560010 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

(3) ಕಛೇರಿ ಪ್ರತಿ.